**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಹಾಗೂ ಜೆ. ಎಮ್. ಎಫ್. ಸಿ, ನ್ಯಾಯಾಲಯ ಅಥಣಿ.**

**ಸಿ.ಸಿ. ನಂ. : 3077/2018** **ದಿನಾಂಕಃ 10-07-2026**
**ಸಿ ಡಬ್ಲೂ : 3**
**ಪಿ ಡಬ್ಲೂ : 2**

-----------------------------------------------------------------------------------

**:ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು:**

****

| | |
|---|---|
| ಸಾಕ್ಷಿದಾರನ ಹೆಸರು | ಸಾಬು ಸದಾಶಿವ ಜನವಾಡ. |
| ಗಂಡ/ ತಂದೆಯ ಹೆಸರು | ಸದಾಶಿವ ಜನವಾಡ. |
| ವಯಸ್ಸು | 38 ವರ್ಷ |
| ಉದ್ಯೋಗ | ಶೇತ್ಕಿ. |
| ವಾಸಸ್ಥಳ | ಸಾಃ ಬೆಡರಟ್ಟಿ. |

**ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-2 ರವರ ಪರಿಚಯ ಇರುತ್ತದೆ. ಚಾಸಾ-1 ರವರ ಪರಿಚಯ ಇಲ್ಲ. ಆರೋಪಿಯ ಪರಿಚಯ ಇಲ್ಲ.

ನಾನು ಇಂಗ್ಲೀಷ ಭಾಷೆಯಲ್ಲಿ ಸಹಿ ಮಾಡುತ್ತೇನೆ. ಸಾಕ್ಷಿಗೆ ಅಪಘಾತ ಸ್ಥಳದ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲಾತಿಯನ್ನು **ನಿಪಿ-2** ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-2(ಎ)** ಎಂದು ಗುರುತಿಸಲಾಯಿತು. ಸಾಕ್ಷಿಗೆ ಮೋಟಾರ ಸೈಕಲ ಹಾಜರುಪಡಿಸಿದ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದಾಖಲಾತಿಯನ್ನು **ನಿಪಿ-3** ಹಾಗೂ ಸಾಕ್ಷಿಯ ಸಹಿಯನ್ನು **ನಿಪಿ-3(ಎ)** ಎಂದು ಗುರುತಿಸಲಾಯಿತು. ನಿಪಿ-2 ಹಾಗೂ 3 ರಲ್ಲಿ ಇರುವ ಸಹಿಯನ್ನು ನಾನು ಪೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಸಹಿಗಳನ್ನು ಯಾತಕ್ಕಾಗಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನಗೆ ಸಹಿ ಮಾಡು ಎಂದು ಹೇಳಿದರು ಅದಕ್ಕಾಗಿ ಮಾಡಿರುತ್ತೇನೆ. ನಿಪಿ-2 ಹಾಗೂ 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಜೊತೆ ಆ ದಿನ ಚಾಸಾ-2 ರವರು ಸಹಿ ಮಾಡಿರುತ್ತಾನೆ. ನನ್ನ ಸಮಕ್ಷಮ ಯಾವುದೇ ವಾಹನವನ್ನು ವಶಪಡಿಸಿಕೊಂಡಿಲ್ಲ.

(ಸಾಕ್ಷಿಯನ್ನು **ಭಾಗಶಃ** ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಮಾನ್ಯ ಸರ್ಕಾರಿ ವಕೀಲರು ಪಾಟೀ ಸವಾಲಿಗಾಗಿ ಅನುಮತಿ ಕೋರುತ್ತಾರೆ, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ - ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 16-05-2018 ರಂದು ಮಧ್ಯಾಹ್ನ 4-30 ರಿಂದ 5-30 ರವರೆಗೆ ಅಥಣಿ ವಿಜಯಪುರ ರಸ್ತೆಯ ಮೇಲೆ ಅಪಘಾತದ ಸ್ಥಳದಲ್ಲಿ ಪೋಲಿಸರು ಪಂಚನಾಮೆ ಮಾಡುವ ಸಮಯದಲ್ಲಿ ನಾನು ನಿಪಿ-2 ದಾಖಲಾತಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಪಂಚನಾಮೆ ಮಾಡಿದ ನಂತರ ನಿಪಿ-2 ರಲ್ಲಿ ಇರುವ ಅಂಶಗಳನ್ನು ಪೋಲೀಸರು ನನಗೆ ಹಾಗೂ ಚಾಸಾ-2 ರವರಿಗೆ ಓದಿ ಹೇಳಿದ ನಂತರ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ.

ದಿಃ 18-06-2018 ರಂದು ಬೆಳ್ಳಿಗ್ಗೆ 10 ಗಂಟೆಯಿಂದ 11 ಗಂಟೆಯವರೆಗೆ ಹಿರೊ ಸ್ಪೆಂಡರ್ ಶೈನ್‌ಮೋಟಾರ ಸೈಕಲ ನಂ. ಕೆಎ 23 ಇ. 7515 ವಾಹನವನ್ನು ಹಾಜರುಪಡಿಸಿದಾಗ ಅದನ್ನು ಪಂಚನಾಮೆ ಮಾಡುವ ಸಮಯದಲ್ಲಿ ನಾನು ಹಾಗೂ ಚಾಸಾ-2 ನಿಪಿ-3 ಕ್ಕೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿ-3 ರಲ್ಲಿ ಇವರು ಸಂಗತಿಗಳನ್ನು ನನಗೂ ಹಾಗೂ ಚಾಸಾ-2 ರವರಿಗೆ ಓದಿ ಹೇಳದ ಬಳಿಕ ನಾನು ಅದಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನನಗೆ ನಿಪಿ-2 ಹಾಗೂ 3 ರ ಎಲ್ಲಾ ಸಂಗತಿಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ . ಎ.ಎಸ್. ಎಸ್ ವಕೀಲರಿಂದಃ**

ಪಾಟೀ ಸವಾಲು ಇಲ್ಲ ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸರಿ ಇದೆ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಹಾಗೂ ಜೆ.ಎಮ್.ಎಫ್.ಸಿ.ನ್ಯಾಯಾಲಯ, ಅಥಣಿ.